**ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,**
ದೇವರಾಜ ಅರಸ್ ಮಾರ್ಕೆಟ್, ಹಾಸನ. 264825

| ವಾರ್ಷಿಕ ಬಡ್ಡಿ ದರದ ವಿವರಗಳು | ಸಾಮಾನ್ಯರಿಗೆ % | ಹಿರಿಯ ನಾಗರಿಕರಿಗೆ % |
|---|---|---|
| * 1 ವರ್ಷದಿಂದ 3 ವರ್ಷಗಳವರೆಗೆ | 10.5 | 11 |
| * 181 ದಿನಗಳಿಂದ 365 ದಿನಗಳವರೆಗೆ | 8 | 8.5 |
| * 91 ದಿನಗಳಿಂದ 180 ದಿನಗಳವರೆಗೆ | 7 | 7.5 |
| * 31 ದಿನಗಳಿಂದ 90 ದಿನಗಳವರೆಗೆ | 6 | 6.5 |
| * 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ | | |

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ

# ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ

ವ್ಯವಸ್ಥಾಪಕ ಸಂಪಾದಕ : ಎಸ್.ಎನ್.ಮಂಜುನಾಥದತ್ತ

PREMIER MARKETING
#817/A, Opp: Mallige Residency, Govt.High School Field, Road, Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner



## 'ರಾವಣ ರಾಮನಿಗಿಂತ ಹೆಚ್ಚು ಸಂಭಾವಿತ'

ಕೇರಳ ಸಿಪಿಎಂ ನಾಯಕ ಮತ್ತು ಕೇರಳ ಸರ್ಕಾರದ ಲೋಕೋಪಯೋಗಿ ಇಲಾಖೆ ಸಚಿವ ಜಿ.ಸುಧಾಕರನ್ ರಾಮಾಯಣ ಮಹಾಕಾವ್ಯದ ಬಗ್ಗೆ ಹೇಳಿಕೆ ನೀಡಿ, ಸಾಮಾಜಿಕ ಮಾಧ್ಯಮದಲ್ಲಿ ಮತ್ತೊಂದು ಬಿಸಿ ಚರ್ಚೆಯನ್ನು ಹುಟ್ಟು ಹಾಕಿದ್ದಾರೆ. ಅವರ ಪ್ರಕಾರ ರಾವಣ ರಾಮನಿಗಿಂತ ಸಂಭಾವಿತ ವ್ಯಕ್ತಿ.ರಾಮ ಹೇಗೆ ಸಂಭಾವಿತ ವ್ಯಕ್ತಿ ಎನಿಸುತ್ತಾನೆ. ಅವನು ತನ್ನ ಮಡದಿ ಸೀತೆಯನ್ನು ಸೋದರನ ಜೊತೆ ದಟ್ಟ ಅರಣ್ಯದಲ್ಲಿ ಬಿಟ್ಟು ಹೋಗಿರಲಿಲ್ಲವೇ? ಎಂದು ಪ್ರಶ್ನಿಸಿದ್ದಾರೆ.



## 'ಅಮೆರಿಕ ಹೇಳಿಕೆ ಆಘಾತಕಾರಿ'

ಪ್ಯಾರಿಸ್ ಹವಾಮಾನ ಒಪ್ಪಂದ ಕುರಿತಂತೆ ಭಾರತದ ವಿರುದ್ಧ ಅಮೆರಿಕ ಅಧ್ಯಕ್ಷ ಟ್ರಂಪ್ ನೀಡಿರುವ ಹೇಳಿಕೆ ನಿಜಕ್ಕೂ ಆಘಾತವನ್ನು ತಂದಿದೆ ಎಂದು ಕೇಂದ್ರ ಗೃಹ ಸಚಿವ ರಾಜನಾಥ್ ಸಿಂಗ್ ಮಂಗಳವಾರ ಹೇಳಿದ್ದಾರೆ. ಅಮೆರಿಕ ತನ್ನ ನಿರ್ಧಾರ ಹಾಗೂ ಹೇಳಿಕೆ ಕುರಿತಂತೆ ಮರು ಚಿಂತನೆ ನಡೆಸುತ್ತದೆ ಎಂದು ನಾನು ನಂಬಿದ್ದೇನೆಂದು ಹೇಳಿದ್ದಾರೆ. *(-ಹೆಚ್ಚಿನ ವಿವರ 2ನೇ ಪುಟಕ್ಕೆ)*



## ಕಾಂಗ್ರೆಸ್ ಅಧ್ಯಕ್ಷ ಸ್ಥಾನ ತೊರೆಯಲಿರುವ ಸೋನಿಯಾ ಗಾಂಧಿ?

ಅಕ್ಟೋಬರ್ 15ರಂದು ಕಾಂಗ್ರೆಸ್‌ನ ಆಂತರಿಕ ಚುನಾವಣೆ ನಿಗದಿಯಾಗಿದ್ದು, ಸೋನಿಯಾ ಗಾಂಧಿ ಅಧ್ಯಕ್ಷ ಸ್ಥಾನ ತೊರೆಯುವ ಸಾಧ್ಯ ಹೆಚ್ಚಿದೆ. ಆಂತರಿಕ ಚುನಾವಣೆ ಹೊತ್ತಿಗೆ ಉಪಾಧ್ಯಕ್ಷ ರಾಹುಲ್ ಗಾಂಧಿ ಅವರು ಪಕ್ಷದ ಅಧ್ಯಕ್ಷ ಸ್ಥಾನ ವಹಿಸಿಕೊಳ್ಳುವುದು ಸಾಧ್ಯವಾಗುವಂತೆ ಸೋನಿಯಾ ಅವರು ಸ್ಥಾನ ಬಿಟ್ಟು ಕೊಡಬಹುದು ಎಂದು ತಿಳಿದು ಬಂದಿದೆ.

ಜನತಾಮಾಧ್ಯಮ ಬೆಳಗಿನ ದೈನಿಕ | JANATHAMADHYAMA | KARKAN. RNI 41566. | ಸಂಪುಟ : 40 | ಸಂಚಿಕೆ :210 | ಬುಧವಾರ | ಜೂ.7, 2017 | ದೂರವಾಣಿ : 268494 | ಪುಟ-4 | ರೂ.2-00 | NO. HSN-761/ 2015-17

# ಆನೆ ಕಾರಿಡಾರ್ : ಶೀಘ್ರ ದೆಹಲಿಗೆ ನಿಯೋಗ

**ಬೆಂಗಳೂರು :** ಹಾಸನ ಜಿಲ್ಲೆಯಲ್ಲಿ ಆನೆ ದಾಳಿಯಿಂದ ಪ್ರಾಣ, ಆಸ್ತಿ ಹಾನಿ ತಡೆಯಲು ಆನೆ ಕಾರಿಡಾರ್ ಯೋಜನೆಗೆ ರಾಜ್ಯ ಸರ್ಕಾರ ಆಸಕ್ತಿ ವಹಿಸಿದೆ. ಈ ಕುರಿತು ಕೇಂದ್ರಕ್ಕೆ ಶೀಘ್ರವೇ ನಿಯೋಗ ಕರೆದೊಯ್ಯಲಾಗುವುದು ಎಂದು ಅರಣ್ಯ ಸಚಿವ ರಮಾನಾಥ ರೈ ಭರವಸೆ ನೀಡಿದರು.

ಮಂಗಳವಾರ ವಿಧಾನಸಭೆ ಅಧಿವೇಶನದಲ್ಲಿ ಆಲೂರು-ಸಕಲೇಶಪುರ ಕ್ಷೇತ್ರದ ಶಾಸಕ ಹೆಚ್.ಕೆ.ಕುಮಾರಸ್ವಾಮಿ ಈ ಕುರಿತು ಗಮನ ಸೆಳೆದ ಪ್ರಶ್ನೆಗೆ ಸಚಿವರು ಪ್ರತಿಕ್ರಿಯಿಸಿದರು.

ಆನೆ ಕಾರಿಡಾರ್‌ಗೆ ಸಂಬಂಧಿಸಿದಂತೆ ಈಗಾಗಲೇ ಕೇಂದ್ರಕ್ಕೆ ರಾಜ್ಯ ಸರ್ಕಾರ ಪತ್ರ ಬರೆದಿದೆ. ದೆಹಲಿಗೆ ತೆರಳಿ ಆನೆ ಕಾರಿಡಾರ್ ಯೋಜನೆಗೆ ಒಪ್ಪಿಗೆ ಪಡೆಯಲಾಗುವುದು ಎಂದು ತಿಳಿಸಿದರು. ಆನೆ ಸಮಸ್ಯೆ ಬಗ್ಗೆ ತಮಗೂ ಅರಿವಿದೆ. ಈ ಬಗ್ಗೆ ಅಧಿಕಾರಿಗಳು ವಿವರವಾದ ಮಾಹಿತಿ ನೀಡಿದ್ದಾರೆ. ನಾಳೆ ಮತ್ತೆ ಈ ಕುರಿತು ಸುದೀರ್ಘ ಚರ್ಚೆ ನಡೆಸೋಣ ಎಂದು ಹೇಳಿದರು. *(-4ನೇ ಪುಟಕ್ಕೆ)*

- ವಿಧಾನಸಭೆ ಅಧಿವೇಶನದ ಶೂನ್ಯ ವೇಳೆಯಲ್ಲಿ ಚರ್ಚೆ
- ಆಲೂರು-ಸಕಲೇಶಪುರ ತಾಲ್ಲೂಕಿನಲ್ಲಿನ ಕಾಡಾನೆ ಸಮಸ್ಯೆ
- ಆನೆ, ಮಾನವನ ನಡುವಿನ ಸಂಘರ್ಷದ ಕುರಿತು ಪ್ರಸ್ತಾಪ
- ಸಭೆಯಲ್ಲಿ ವಿವರಣೆ ನೀಡಿದ ಶಾಸಕ ಹೆಚ್.ಕೆ.ಕುಮಾರಸ್ವಾಮಿ
- ತದೇಕಚಿತ್ತದಿಂದ ಸಮಸ್ಯೆ ಆಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಅರ್ಧ ಗಂಟೆ ಚರ್ಚೆಗೆ ವಿಧಾನಸಭಾಧ್ಯಕ್ಷರ ಸಮ್ಮತಿ



### ಸಿ.ಎಂ. ಸಿದ್ದರಾಮಯ್ಯ ಸಕಾರಾತ್ಮಕ ಪ್ರತಿಕ್ರಿಯೆ



ಜಿಲ್ಲೆಯಲ್ಲಿ ಆನೆ ಸಮಸ್ಯೆ ಬಗ್ಗೆ ಶೂನ್ಯ ವೇಳೆಯಲ್ಲಿ ಚರ್ಚೆ ನಡೆಯುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಹಾಜರಿದ್ದರು. ಶಾಸಕ ಹೆಚ್.ಕೆ.ಕುಮಾರಸ್ವಾಮಿ ಅವರ ಪ್ರಶ್ನೆಗೆ ಅರಣ್ಯ ಸಚಿವ ರಮಾನಾಥ ರೈ ಉತ್ತರಿಸುತ್ತಿದ್ದರು. ಆಗ ಹೆಚ್.ಕೆ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳ ಗಮನವನ್ನು ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು, ಅರಣ್ಯ ಸಚಿವರು ಪ್ರತಿಕ್ರಿಯಿಸಿದ್ದಾರೆ. ಆನೆ ಸಮಸ್ಯೆ ನಿವಾರಣೆಗೆ ಎಲ್ಲಾ ಅಗತ್ಯ ಕೈಗೊಳ್ಳಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.



"ಶೂನ್ಯ ವೇಳೆಯ ಅಲ್ಪ ಸಮಯದಲ್ಲಿ ಆನೆ ಸಮಸ್ಯೆ ಕುರಿತು ಚರ್ಚಿಸಲು ಸಾಧ್ಯವಿಲ್ಲ. ಇದಕ್ಕೆ ಅರ್ಧ ಗಂಟೆಯಾದರೂ ಸಮಯಾವಕಾಶ ನೀಡಬೇಕು. ಇದಕ್ಕೆ ವಿಧಾನಸಭಾಧ್ಯಕ್ಷರು ಅನುಮತಿ ನೀಡಬೇಕು. ಮೂರು-ನಾಲ್ಕು ಜಿಲ್ಲೆಗಳಲ್ಲಿ ಈ ಸಮಸ್ಯೆ ಇದೆ.

*-ಕೆ.ಜಿ.ಬೋಪಯ್ಯ, ಶಾಸಕರು.*



"ನನ್ನ ಕ್ಷೇತ್ರದಲ್ಲಿ ಆನೆ ಸಮಸ್ಯೆ ಬಿಗಡಾಯಿಸಿದೆ. ಪ್ರತಿ ಬಾರಿಯೂ ಸದನದಲ್ಲಿ ಪ್ರಸ್ತಾಪಿಸುತ್ತೇನೆ. ಕೇಂದ್ರ, ಸರ್ಕಾರಕ್ಕೆ ರಾಜ್ಯ ಕೇವಲ ಪತ್ರ ಬರೆದರೆ ಆಗುತ್ತದೆಯೇ? ಇದು ಗಂಭೀರ ವಿಚಾರ. ಪತ್ರ ಬರೆದು ಕುಳಿತುಕೊಂಡರೆ ಸಮಸ್ಯೆ ಪರಿಹಾರವಾಗುತ್ತದೆಯೇ?

*-ಹೆಚ್.ಕೆ.ಕುಮಾರಸ್ವಾಮಿ, ಶಾಸಕ.*

## ವಿವಿಧ ಕಳವು : ಐವರು ಮಹಿಳೆಯರ ಬಂಧನ



**ಅರಕಲಗೂಡು:** ಇಲ್ಲಿಯ ಪೊಲೀಸ್ ಠಾಣಾ ವ್ಯಾಪ್ತಿಯ ವಿವಿಧ 5 ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದ ಐವರು ಮಹಿಳಾ ಕಳ್ಳಿಯರನ್ನು ಬಂಧಿಸಿ 1.85 ಲಕ್ಷ ರೂ ಬೆಲೆ ಬಾಳುವ ಚಿನ್ನ, ಬೆಳ್ಳಿ ಮತ್ತು ತಾಮ್ರದ ಒಡವೆಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಸಿಪಿಐ ಶಿವರಾಜ್ ಆರ್.ಮುಧೋಳ್ ಮಂಗಳವಾರ ತಿಳಿಸಿದರು.

ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ತಾಲ್ಲೂಕಿನ ಕೆರೆಕೋಡಿ ಹನುವಿನಕಟ್ಟೆ ಗ್ರಾಮದವರಾದ ಕುಮಾರಿ (28), ಸುಶೀಲ (25), ಮಂಜುಳ (23), ಗಂಗಾ (24), ಪುಷ್ಪ (21) ಬಂಧಿತ ಕಳ್ಳಿಯರು. ಪ್ಲಾಸ್ಟಿಕ್, ಹಳೇ ಚಿಂದಿ ಪೇಪರ್, ತಲೆಗೂದಲು ಆಯುವ ಇವರು ಅರಕಲಗೂಡು ಮತ್ತು ಕೊಣನೂರು ಪೊಲೀಸ್ ಠಾಣಾ ವ್ಯಾಪ್ತಿಯ ವಿವಿಧ 5 ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದರು ಎಂದು ಸುದ್ದಿಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು.

ಆರೋಪಿಗಳಿಂದ 36 ಗ್ರಾಂ ತೂಕದ ಚಿನ್ನದ ಒಡವೆ, 150 ಗ್ರಾಂ ತೂಕದ ಬೆಳ್ಳಿ ಆಭರಣ, 75000 ರೂ. ಮೌಲ್ಯದ ತಾಮ್ರದ ಪಾತ್ರೆ, 1.85 ಲಕ್ಷ ರೂ ಬೆಲೆ ಬಾಳುವ ವಸ್ತುಗಳನ್ನು ವಶಕ್ಕೆ ಪಡೆದು ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಸಬ್ ಇನ್ಸ್‌ಪೆಕ್ಟರ್ ರವಿ ಕಿರಣ್ ಹಾಗೂ ಸಿಬ್ಬಂದಿ ಕಳವು ಪ್ರಕರಣ ಭೇದಿಸುವಲ್ಲಿ ಸಹಕರಿಸಿದರು ಎಂದರು.

# ವರದಕ್ಷಿಣೆ ಕಿರುಕುಳಕ್ಕೆ ಗೃಹಿಣಿ ಬಲಿ



**ಹೊಳೆನರಸೀಪುರ :** ವರದಕ್ಷಿಣೆ ಕಿರುಕುಳಕ್ಕೆ ಗೃಹಿಣಿಯೊಬ್ಬಳು ಬಲಿಯಾಗಿದ್ದು, ಗಂಡನ ಮೇಲೆ ಕೊಲೆ ಶಂಕೆ ವ್ಯಕ್ತವಾಗಿದೆ.

ಘಟನೆ ತಾಲ್ಲೂಕಿನ ಹಂಗರಹಳ್ಳಿ ಗ್ರಾಮದಲ್ಲಿ ನಡೆದಿದ್ದು, ಪ್ರಕರಣ ಮಂಗಳವಾರ ಬೆಳಿಗ್ಗೆ ಬೆಳಕಿಗೆ ಬಂದಿದೆ. ಕೆ.ಟಿ.ಶ್ವೇತ (22) ಎಂಬಾಕೆಯೇ ಗಂಡನ ವರದಕ್ಷಿಣೆ ಕಿರುಕುಳಕ್ಕೆ ಬಲಿಯಾಗಿರುವ ದುರ್ದೈವಿ ಗೃಹಿಣಿಯಾಗಿದ್ದಾಳೆ. ಈಕೆ ಹಾಸನ ತಾಲ್ಲೂಕಿನ ಕಾರ್ಲೆ ಗ್ರಾಮದ ಸುಧಾ ಮತ್ತು ತಿಮ್ಮರಾಯಿಗೌಡ ದಂಪತಿಯ ಪುತ್ರಿಯಾಗಿದ್ದಾಳೆ.

ಶ್ವೇತ ಮತ್ತು ಹೊಳೆನರಸೀಪುರ ತಾಲ್ಲೂಕಿನ ಹಂಗರಹಳ್ಳಿ ಗ್ರಾಮದ ನಾಗರತ್ನ ಮತ್ತು ಲೇ||ಧ್ರುವಕುಮಾರ್ ಪುತ್ರ, ಆಟೋ ಚಾಲಕ ಕಿರಣ್ ಇಬ್ಬರು ಪರಸ್ಪರ ಪ್ರೀತಿಸಿ ಸುಮಾರು 2 ವರ್ಷಗಳ ಹಿಂದೆ ಮದುವೆಯಾಗಿದ್ದರು. ಮಗಳು ಚೆನ್ನಾಗಿರಲೆಂದು ಶ್ವೇತಾಳ ಪೋಷಕರು 150 ಗ್ರಾಂ ಚಿನ್ನಾಭರಣ ಹಾಗೂ ಹಣವನ್ನು ವರದಕ್ಷಿಣೆಯಾಗಿ ನೀಡಿದ್ದರೆನ್ನಲಾಗಿದೆ. ಕಿರಣ್ ಹಂಗರಹಳ್ಳಿ, ಕಾರ್ಲೆ ಗ್ರಾಮದಲ್ಲಿ ಆಟೋ ಓಡಿಸಿಕೊಂಡು, ನಂತರ ಮುಕ್ಕುಂದೂರು ಹೊಸಹಳ್ಳಿಯ ಗ್ಯಾಸ್ ಲೈನ್ ಸೆಕ್ಯುರಿಟಿಯಲ್ಲಿ ರಾತ್ರಿ ಪಾಳಿ ಕೆಲಸ ಮಾಡಿಕೊಂಡಿದ್ದ.

ಶ್ವೇತ ಮತ್ತು ಕಿರಣ್ ಮದುವೆಯಾದ ಕೆಲ ತಿಂಗಳು ಅನ್ಯೋನ್ಯವಾಗಿಯೇ ಇದ್ದರಾದರೂ ಹಣದ ದಾಹದಿಂದ ಕಿರಣ್ ತವರು ಮನೆಯಿಂದ ಹೆಚ್ಚಿನ ವರದಕ್ಷಿಣೆ ತರುವಂತೆ ಪತ್ನಿ ಶ್ವೇತಳೊಂದಿಗೆ ಆಗಾಗ್ಗೆ ಮದ್ಯ ಕುಡಿದು ಬಂದು ಜಗಳ ಮಾಡುತ್ತಿದ್ದ. ಇದಕ್ಕೆ ಆಕೆ ಒಪ್ಪದಿದ್ದಾಗ ದೈಹಿಕ ಹಾಗೂ ಮಾನಸಿಕ ಕಿರುಕುಳ ನೀಡುತ್ತಿದ್ದ ಎಂದು ಈತನ ನಡವಳಿಕೆ ಬಲ್ಲ ಗ್ರಾಮದ ಕೆಲವರು ತಿಳಿಸಿದ್ದಾರೆ.

ಜೂನ್ 5ರಂದು ಸೋಮವಾರ ಮನೆಯಿಂದ ಹೊರಗೆ ಸುತ್ತಾಡಿಕೊಂಡು ಬರೋಣವೆಂದು ಪತ್ನಿಯನ್ನು ಮುದ್ದು ಮಾಡಿ ಜೊತೆಯಲ್ಲಿ ಕರೆದುಕೊಂಡು ಹೋದ ಕಿರಣ್ ಸಂಜೆ ಪತ್ನಿಯೊಂದಿಗೆ ಮನೆಗೆ ವಾಪಸ್ಸಾಗಿದ್ದ. ದಂಪತಿಗಳಿಬ್ಬರೂ ಮನೆಯಿಂದ ಜೊತೆಯಲ್ಲೇ ಹೊರಗಡೆ ಹೋಗಿ ನಂತರ ಸಂಜೆ ವಾಪಸ್ಸಾಗಿದ್ದನ್ನು ಗ್ರಾಮದ ಕೆಲವರು ನೋಡಿದ್ದಾರೆ. *(-4ನೇ ಪುಟಕ್ಕೆ)*

# ಶೈಕ್ಷಣಿಕ ಗುಣಮಟ್ಟ : ನಿರಂತರ ಮೇಲ್ವಿಚಾರಣೆಗೆ ಸೂಚನೆ

## ಜಿಲ್ಲಾಧಿಕಾರಿ ಕಛೇರಿ ಆವರಣದಲ್ಲಿ ಸರ್ಕಾರಿ ಶಾಲೆಗಳ ಉನ್ನತೀಕರಣದ ಬಗ್ಗೆ ಚರ್ಚೆ



**ಹಾಸನ :** ಸರ್ಕಾರಿ ಶಾಲೆಗಳು ಸಮಾಜದ ಆಸ್ತಿ. ಅವುಗಳ ಸಮಗ್ರ ಸಬಲೀಕರಣ ಎಲ್ಲರ ಜವಾಬ್ದಾರಿ. ಇದಕ್ಕಾಗಿ ಎಲ್ಲಾ ನಾಗರಿಕರು ಪರಿಶ್ರಮ ವಹಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷೆ ಅಮರ್ ಆಳ್ವ ಕರೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸರ್ಕಾರಿ ಶಾಲೆಗಳ ಉನ್ನತೀಕರಣಕ್ಕೆ ಸಂಬಂಧಿಸಿದಂತೆ ಮಂಗಳವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಸರ್ಕಾರಿ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ವೃದ್ಧಿ ಕುರಿತಂತೆ ಅನೇಕ ಸಲಹೆ ಸೂಚನೆಗಳನ್ನು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ನೀಡಿದರು. ಅಲ್ಲದೇ ಈ ಬಗ್ಗೆ ನಿರಂತರ ಮೇಲ್ವಿಚಾರಣೆ ನಡೆಸುವಂತೆ ಜಿಲ್ಲಾಧಿಕಾರಿ ವಿ.ಚೈತ್ರ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ವೆಂಕಟೇಶ್ ಕುಮಾರ್‌ಗೆ ತಿಳಿಸಿದರು.

ಕೇವಲ ಇಂಗ್ಲೀಷ್ ಮಾಧ್ಯಮ ಶಿಕ್ಷಣ ಕೊರತೆ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಇಳಿಮುಖಕ್ಕೆ ಕಾರಣವಲ್ಲ. ಅಲ್ಲಿ ಮೂಲಭೂತ ಸೌಕರ್ಯಗಳು ಮತ್ತು ಶೈಕ್ಷಣಿಕ ವಾತಾವರಣದ ಕೊರತೆ ಅದಕ್ಕೆ ಮುಖ್ಯ ಕಾರಣ. ಸರ್ಕಾರಿ ಶಾಲೆಗಳಲ್ಲಿ ಕಲಿತ ಅನೇಕ ವಿದ್ಯಾರ್ಥಿಗಳು ಸಮಾಜದ ವಿವಿಧ ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಅವರೆಲ್ಲರೂ ತಾವು ಕಲಿತ ಶಾಲೆಗಳ ಬಗ್ಗೆ ಅಪಾರವಾದ ಪ್ರೀತಿ ಮತ್ತು ಗೌರವವನ್ನು ಹೊಂದಿರುತ್ತಾರೆ. ಹಾಗಾಗಿ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಇನ್ನೊಂದು ತಿಂಗಳೊಳಗಾಗಿ ಹಳೇ ವಿದ್ಯಾರ್ಥಿಗಳ ಸಂಘಗಳನ್ನು ರಚಿಸಿ ಸಭೆ ನಡೆಸಬೇಕು. ಇದರಿಂದ ಆ ಶಾಲೆಗಳ ಶೇ.50ರಷ್ಟು ಸಮಸ್ಯೆ ಕೂಡಲೇ ಬಗೆಹರಿಯಬಲ್ಲದು. ಹಾಗಾಗಿ ಈ ನಿಟ್ಟಿನಲ್ಲಿ ತಕ್ಷಣ ಕ್ರಮ ವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. *(-4ನೇ ಪುಟಕ್ಕೆ)*

### 'ನೆಪ ಮಾತ್ರಕ್ಕೆ ಗ್ರಂಥಾಲಯಗಳು ಬೇಡ'

ಎಲ್ಲಾ ಶಾಲೆಗಳಲ್ಲಿ ಶೌಚಾಲಯವಿರಬೇಕು. ಅದು ಸದ್ಬಳಕೆಯಾಗಬೇಕು. ಮಕ್ಕಳಿಗೆ ಕೈ ತೊಳೆಯುವ ಅಭ್ಯಾಸಗಳನ್ನು ಕಲಿಸಬೇಕು. ಗಣಕ ಯಂತ್ರಗಳ ಬಗ್ಗೆ ಕನಿಷ್ಠ ಅರಿವನ್ನಾದರೂ ಮೂಡಿಸಬೇಕು. ಮಕ್ಕಳಿಗೂ ಫ್ಯಾನ್‌ಗಳ ಸೌಲಭ್ಯ ದೊರೆಯುವಂತಾಗಬೇಕು ಎಂದು ಕೃಪ ಆಳ್ವ ಆದೇಶಿಸಿದರು. ಶಾಲೆಯಲ್ಲಿ ಕೇವಲ ನೆಪ ಮಾತ್ರಕ್ಕೆ ಗ್ರಂಥಾಲಯಗಳು ಅಥವಾ ಓದು ಮೂಲೆಗಳಿರದೆ ವಿದ್ಯಾರ್ಥಿಗಳಿಗೆ ಓದಿನ ಅಭ್ಯಾಸ, ಆಸಕ್ತಿಗಳನ್ನು ಹೆಚ್ಚಿಸುವ ರೂಪದಲ್ಲಿರಬೇಕು. ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕರು ಕ್ರಮ ವಹಿಸಬೇಕು ಎಂದರು.

### ಹೊರ ಗುತ್ತಿಗೆ ಮೇಲೆ ನೇಮಕ

ಸರ್ಕಾರಿ ಶಾಲೆಯ ಮಕ್ಕಳು ಖಾಸಗಿ ಶಾಲಾ ಮಕ್ಕಳೊಂದಿಗೆ ಸ್ಪರ್ಧೆ ನಡೆಸಬೇಕಾಗುವುದರಿಂದ ಅಲ್ಲಿಯೂ ಅದೇ ಗುಣಮಟ್ಟದ ಕನಿಷ್ಠ ಮೂಲಭೂತ ಸೌಕರ್ಯಗಳು ದೊರೆಯಬೇಕು. ಶಿಕ್ಷಕರ ಕೊರತೆ ಇರುವ ಕಡೆಗಳಲ್ಲಿ ಹೊರ ಗುತ್ತಿಗೆ ಮೇಲೆ ನೇಮಕ ಮಾಡಿಕೊಳ್ಳಲು ಅನುಕೂಲವಾಗುವಂತೆ ಸರ್ಕಾರದೊಂದಿಗೆ ವ್ಯವಹರಿಸಿ ಅಗತ್ಯ ಅನುಕೂಲಗಳನ್ನು ಮಾಡಿಕೊಡಲಾಗುವುದು ಎಂದು ಕೃಪ ಆಳ್ವ ಹೇಳಿದರು.

# ಕಾಫಿ ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ

## ಸಕಲೇಶಪುರ ಪಟ್ಟಣದಲ್ಲಿ ಕಾಫಿ ಮಂಡಳಿ ಅಧ್ಯಕ್ಷ ಬೋಜೇಗೌಡರಿಗೆ ಅಭಿನಂದನೆ




**ಸಕಲೇಶಪುರ :** ಕಾಫಿ ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಕಾಫಿ ಮಂಡಳಿ ಅಧ್ಯಕ್ಷ ಬೋಜೇಗೌಡ ಭರವಸೆ ನೀಡಿದರು.

ಪಟ್ಟಣದ ಎಚ್.ಡಿ.ಪಿ.ಎ. ಸಭಾಂಗಣದಲ್ಲಿ ಕೆಜಿಎಫ್ ವತಿಯಿಂದ ಮಂಗಳವಾರ ತಮಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಬೆಳೆಗಾರರ ಮನವಿ ಸ್ವೀಕರಿಸಿ ಮಾತನಾಡಿದ ಅವರು, ಮುಂದಿನ 18 ತಿಂಗಳ ತಮ್ಮ ಅಧಿಕಾರವಧಿಯಲ್ಲಿ ಕಾಫಿ ಬೆಳೆಯುವ ಪ್ರತಿಯೊಂದು ಪ್ರದೇಶಕ್ಕೂ ಭೇಟಿ ನೀಡಿ ಸಮಸ್ಯೆಗಳ ನೇರ ಚಿತ್ರಣವನ್ನು ಅರಿತು ರಾಜ್ಯ ಮತ್ತು ಕೇಂದ್ರ ಸರ್ಕಾರದ ಗಮನ ಸೆಳೆಯಲಾಗುವುದು. ಇದಕ್ಕೆ ಕರ್ನಾಟಕ ಕಾಫಿ ಬೆಳೆಗಾರರ ಒಕ್ಕೂಟ ಮತ್ತು ಎಚ್‌ಡಿಪಿಎ ಸಹಕಾರ ಅತ್ಯಗತ್ಯ ಎಂದರು.

ಸ್ವತಃ ಕಾಫಿ ಬೆಳೆಗಾರರ ಕುಟುಂಬದಲ್ಲಿ ಜನಿಸಿದ ನನಗೆ ಮೊದಲಿನಿಂದಲೂ ಬೆಳೆಗಾರರ ಸಮಸ್ಯೆಗಳ ಪೂರ್ಣ ಅರಿವಿದೆ. ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳೊಂದಿಗೆ ಸಮಸ್ಯೆ ಬಗ್ಗೆ ಚರ್ಚಿಸಿ ಶೀಘ್ರ ಪರಿಹರಿಸಲಾಗುವುದು ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಜಿಎಫ್ ಅಧ್ಯಕ್ಷ ರಮೇಶ್, ಕಾಫಿ ಮಂಡಳಿಗೆ ಬೆಳೆಗಾರರನ್ನೇ ಅಧ್ಯಕ್ಷರನ್ನಾಗಿ ಮಾಡಬೇಕೆಂಬುದು ಕಾಫಿ ಬೆಳೆಗಾರರ ಮತ್ತು ಸಂಘ ಸಂಸ್ಥೆಗಳ ಬಹುಕಾಲದ ಬೇಡಿಕೆಯಾಗಿತ್ತು. ಇದೀಗ ಅದು ಸಾಕಾರಗೊಂಡಿದೆ. ಬೋಜೇಗೌಡ ಅವರು ಸ್ವತಃ ಕಾಫಿ ಬೆಳೆಗಾರರ ಕುಟುಂಬದಲ್ಲಿ ಜನಿಸಿರುವುದರಿಂದ ಹಾಗೂ ಹಲವಾರು ವರ್ಷಗಳಿಂದ ಬೆಳೆಗಾರರ ಸಂಘಟನೆಗಳೊಂದಿಗೆ ನಿಕಟ ಸಂಪರ್ಕ ಹೊಂದಿರುವುದರಿಂದ ಹೆಚ್ಚು ಅನುಕೂಲವಾಗಲಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಕೆಜಿಎಫ್ ಮಾಜಿ ಅಧ್ಯಕ್ಷ ಬಿ.ಎ.ಜಗನ್ನಾಥ್, ಡಾ.ಎಚ್.ಟಿ.ಕುಮಾರ್, ಡಾ.ಎನ್.ಕೆ.ಪ್ರದೀಪ್, ಕಾರ್ಯದರ್ಶಿ ತೀರ್ಥಮಲ್ಲೇಶ್, ಕಾಫಿ ಮಂಡಳಿ ಸದಸ್ಯ ಎಚ್.ದಯಕುಮಾರ್, ಮುಜಾಹಿದ್ ಆಲಂ ಇನ್ನೂ ಮುಂತಾದವರು ಹಾಜರಿದ್ದರು.

### ಹಾಸನ ಕೃಷಿ ಮಹಾವಿದ್ಯಾಲಯಕ್ಕೆ ನೂತನ ಸಾರಥಿ ನೇಮಕ

**ಹಾಸನ :** ಹಾಸನ ಕೃಷಿ ಮಹಾವಿದ್ಯಾಲಯದ ಡೀನ್ (ಕೃಷಿ) ಹಾಗೂ ಆವರಣ ಮುಖ್ಯಸ್ಥರನ್ನಾಗಿ ಡಾ.ಎನ್.ದೇವಕುಮಾರ್ ಅವರನ್ನು 3 ವರ್ಷಗಳ ಕಾಲಾವಧಿಗೆ ಖಾಯಂ ಆಗಿ ನೇಮಕ ಮಾಡಲಾಗಿದೆ.

ಇವರು ಬೇಸಾಯ ಶಾಸ್ತ್ರ ವಿಭಾಗದಲ್ಲಿ ಡಾಕ್ಟರೇಟ್ ಪದವಿಯನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಿಂದ ಪಡೆದು ವಿವಿಧ ಕ್ಷೇತ್ರಗಳಲ್ಲಿ ಸುದೀರ್ಘವಾಗಿ ಕಾರ್ಯ ನಿರ್ವಹಿಸಿದ್ದಾರೆ.

ಶಿವಮೊಗ್ಗ ಮತ್ತು ಬೆಂಗಳೂರಿನಲ್ಲಿ ಸಾವಯವ ಕೃಷಿ ಸಂಶೋಧನಾ ಕೇಂದ್ರಗಳನ್ನು ಸ್ಥಾಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ಇವರು ಸಾವಯವ ಕೃಷಿ ಕ್ಷೇತ್ರಕ್ಕೆ ಅಪಾರ ಕೊಡುಗೆಯನ್ನು ನೀಡಿ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಹೆಸರು ಗಳಿಸಿದ್ದಾರೆ. ಇವರ ಈ ಗಣನೀಯ ಸೇವೆಗೆ ಹಲವು ಪ್ರಶಸ್ತಿಗಳು ಮುಡಿಗೇರಿವೆ.

# ತಟ್ಟೆಕೆರೆ ಗ್ರಾ.ಪಂ. ಕಛೇರಿ ಎದುರು ಪ್ರತಿಭಟನೆ




**ಹಾಸನ :** ಹಂಗಾಮಿ ಖಾತೆ ಮಾಡುವಂತೆ ಪಂಚಾಯಿತಿ ಅಧಿಕಾರಿಗಳ ಮೇಲೆ ಒತ್ತಡ ಹೇರುತ್ತಿರುವ ಶಾಸಕರ ಧೋರಣೆ ಖಂಡಿಸಿ ತಾಲ್ಲೂಕಿನ ತಟ್ಟೆಕೆರೆ ಗ್ರಾಮ ಪಂಚಾಯಿತಿ ಕಛೇರಿ ಎದುರು ಆಶ್ರಯ ಸಮಿತಿ ಸದಸ್ಯರ ನೇತೃತ್ವದಲ್ಲಿ ಗ್ರಾಮಸ್ಥರು ಮಂಗಳವಾರ ಪ್ರತಿಭಟನೆ ನಡೆಸಿದರು.

2012-13ನೇ ಸಾಲಿನಲ್ಲಿ ಶಾಸಕರ ಮೌಖಿಕ ಆದೇಶದ ಮೇರೆಗೆ ಯಾವ ದಾಖಲಾತಿಯನ್ನೂ ಪರಿಗಣಿಸದೆ ಸ್ಥಳೀಯ ತಟ್ಟೆಕೆರೆ ಗ್ರಾಮ ಪಂಚಾಯಿತಿ ವತಿಯಿಂದ ಹಂಗಾಮಿ ಖಾತೆಯನ್ನು ಈಗಾಗಲೇ ಮಾಡಲಾಗಿದೆ. ಹಲವು ಫಲಾನುಭವಿಗಳು ಹಂಗಾಮಿ ಖಾತೆ ಹೊಂದಿದ್ದು, ಹೀಗೆ ಫಲಾನುಭವಿಗಳಿಗೆ ಸಂದಾಯವಾದ ಹಣಕ್ಕೆ ಪಂಚಾಯಿತಿಯಲ್ಲಿ ಯಾವ ಲೆಕ್ಕವೂ ಇಲ್ಲ. ಶಾಸಕರು ಹಾಗೂ ಅಧಿಕಾರಿಗಳು ಈ ವಿಚಾರದಲ್ಲಿ ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ ಎಂದು ದೂರಿದರು.

2015ನೇ ಸಾಲಿನಲ್ಲಿ ಸರಕಾರವು ರಾಜ್ಯಾದ್ಯಂತ ಎಲ್ಲಾ ಆಶ್ರಯ ನಿವಾಸಿಗಳಿಗೆ ಸಾಲ ಮನ್ನಾ ಮಾಡಿ ಎಂದು ಆದೇಶ ನೀಡಿತ್ತು. ಜಿಲ್ಲಾ ಉಸ್ತುವಾರಿ ಸಚಿವರ ಸಮಕ್ಷಮದಲ್ಲಿ ಹೆಚ್.ಡಿ.ದೇವೇಗೌಡ ನಗರ ಮತ್ತು ಕೃಷ್ಣ ನಗರ ನಿವಾಸಿಗಳಿಗೆ ಸಾಲ ಮನ್ನಾದ ತಿಳುವಳಿಕೆ ಪತ್ರವನ್ನೂ ವಿತರಿಸಲಾಗಿತ್ತು. ಫಲಾನುಭವಿಗಳ ಹೆಸರಿನಲ್ಲಿ ಬಂದಿರುವ ಸಾಲ ಮನ್ನಾ ಪತ್ರದ ಆಧಾರದ ಮೇಲೆ ಖಾತೆಯನ್ನು ಮಾಡಲು ಆದೇಶ ನೀಡಲಾಗಿತ್ತು. ಈಗಾಗಲೇ ಹಲವು ಫಲಾನುಭವಿಗಳು ಸಾಲ ಮನ್ನಾ ಪತ್ರ ಪಡೆದು, ಪತ್ರದ ಆಧಾರದ ಮೇಲೆ ಖಾತೆಯನ್ನು ಹೊಂದಿದ್ದಾರೆ ಎಂದು ವಿವರಿಸಿದರು.

ಕೆಲವು ಲೋಪ ದೋಷವಿರುವ ಸಾಲ ಮನ್ನಾ ಪತ್ರವನ್ನು ಈಗಾಗಲೇ ತಡೆ ಹಿಡಿದಿದ್ದು, ಶಾಸಕರು ಸ್ಥಳೀಯ ನಿವಾಸಿಗಳಲ್ಲಿ ವಿನಾಕಾರಣ ಗೊಂದಲ ಸೃಷ್ಟಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

## ಎನ್.ಎಸ್. ಯು.ಐ. ಜಿಲ್ಲಾಧ್ಯಕ್ಷರಾಗಿ ರಂಜಿತ್



**ಹಾಸನ :** ಭಾರತ ರಾಷ್ಟ್ರೀಯ ವಿದ್ಯಾರ್ಥಿ ಕಾಂಗ್ರೆಸ್ (ಎನ್.ಎಸ್.ಯು.ಐ.) ಜಿಲ್ಲಾಧ್ಯಕ್ಷರಾಗಿ ಗೊರೂರಿನ ಬಿ.ಆರ್.ರಂಜಿತ್ ಎರಡನೇ ಬಾರಿಗೆ ಆಯ್ಕೆಯಾಗಿದ್ದಾರೆ.

ರಂಜಿತ್ ಆಯ್ಕೆಗೊಂಡಿರುವುದಕ್ಕೆ ಹರ್ಷಗೊಂಡ ಅವರ ಬೆಂಬಲಿಗರು ಮಂಗಳವಾರ ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿ ಎದುರು ಜಮಾಯಿಸಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರಲ್ಲದೆ, ನೂತನ ಅಧ್ಯಕ್ಷರಿಗೆ ಪುಷ್ಪ ಅರ್ಪಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಎನ್.ಎಸ್.ಯು.ಐ.ನ ಪ್ರಮುಖರಾದ ಸಾಗರ್, ಅವಿನಾಶ್, ರಂಗಸ್ವಾಮಿ, ಉಜ್ವಲ್ ಇತರರು ಹಾಜರಿದ್ದರು.

# ಜಾನುವಾರುಗಳಿಗೆ ಮೇವಿನ ಕೊರತೆ : ತಾ.ಪಂ. ಸಾಮಾನ್ಯ ಸಭೆಯಲ್ಲಿ ಚರ್ಚೆ




**ಚನ್ನರಾಯಪಟ್ಟಣ :** ತಾಲ್ಲೂಕಿನಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಹೆಚ್ಚಾಗಿದ್ದರೂ, ಜಿಲ್ಲಾ ಉಸ್ತುವಾರಿ ಸಚಿವರು ಮಾತ್ರ ಮೇವಿನ ಕೊರತೆ ಇಲ್ಲ ಎಂದು ಹೇಳುತ್ತಿದ್ದಾರೆ. ಇದಕ್ಕೆ ಅಧಿಕಾರಿಗಳು ಉತ್ತರ ನೀಡಬೇಕು ಎಂದು ಪಶು ವೈದ್ಯಾಧಿಕಾರಿ ಸೋಮಶೇಖರ್ ಅವರನ್ನು ತಾಲ್ಲೂಕು ಪಂಚಾಯಿತಿ ಸದಸ್ಯ ಮಂಜಣ್ಣ ತರಾಟೆಗೆ ತೆಗೆದುಕೊಂಡ ಪ್ರಸಂಗ ಮಂಗಳವಾರ ನಡೆಯಿತು.

ಪಟ್ಟಣದ ತಾ.ಪಂ. ಸಭಾಂಗಣದಲ್ಲಿ ಅಧ್ಯಕ್ಷೆ ಸೌಮ್ಯ ಚಂದ್ರೇಗೌಡ ಅವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಸದಸ್ಯ ಮಂಜಣ್ಣ, ಪಶು ಅಧಿಕಾರಿಯನ್ನು ಪ್ರಶ್ನಿಸುತ್ತಾ, ತಾಲ್ಲೂಕಿನ ಹಿರೀಸಾವೆ ಮತ್ತು ಮಟ್ಟನವಿಲೆ ಹೋಬಳಿಗಳಿಗೆ ಒಂದು ಹಿಡಿ ಹುಲ್ಲು ಬಂದಿಲ್ಲ ಎಂದು ಹೇಳಿದಾಗ, ಇದಕ್ಕೆ ಉತ್ತರಿಸಿದ ಅಧಿಕಾರಿ ಸೋಮಶೇಖರ್, ತಾಲ್ಲೂಕಿಗೆ ಸಾಕಷ್ಟು ಮೇವು ಸರಬರಾಜಾಗಿದ್ದು, ಎಲ್ಲಾ ಹೋಬಳಿಗಳಿಗೂ ವಿತರಿಸಲಾಗಿದೆ ಎಂದರು.

ನಂತರ ಸದಸ್ಯ ಮಂಜಣ್ಣ ಪ್ರತಿಕ್ರಿಯಿಸಿ, ವಿತರಣೆಯಾಗಿರುವ ಮೇವಿನ ಬಗ್ಗೆ ಅಧಿಕಾರಿಗಳು ಸಮರ್ಪಕ ಮಾಹಿತಿ ನೀಡಬೇಕು ಎಂದು ಒತ್ತಾಯಿಸಿದರು.

ಸದಸ್ಯ ಮಂಜುನಾಥ್ ಮಾತನಾಡಿ, ಶಿಕ್ಷಣ ಇಲಾಖೆಯಲ್ಲಿ ಆರ್.ಟಿ.ಇ. ಹೆಸರಿನಲ್ಲಿ ಅಧಿಕಾರಿಗಳು ಅಕ್ರಮವೆಸಗುತ್ತಿದ್ದು, ಈ ಬಗ್ಗೆ ಅಧಿಕಾರಿಗಳು ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಬಿಇಓ ಶಿವನಂಜೇಗೌಡ ಉತ್ತರಿಸಿ, ಯಾವ ಅಧಿಕಾರಿಗಳು ಆರ್‌ಟಿಓ ಹೆಸರಿನಲ್ಲಿ ದಂಧೆ ನಡೆಸುತ್ತಿದ್ದಾರೆ ಎಂಬುದರ ಬಗ್ಗೆ ಮಾಹಿತಿ ನೀಡಿದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

"ಹಿರೀಸಾವೆ ಮತ್ತು ಮಟ್ಟನವಿಲೆ ಹೋಬಳಿಗಳಿಗೆ ಒಂದು ಹಿಡಿ ಹುಲ್ಲು ಬಂದಿಲ್ಲ. ವಿತರಣೆಯಾಗಿರುವ ಮೇವಿನ ಬಗ್ಗೆ ಅಧಿಕಾರಿಗಳು ಸಮರ್ಪಕ ಮಾಹಿತಿ ನೀಡಬೇಕು.

*-ಮಂಜಣ್ಣ, ತಾಲ್ಲೂಕು ಪಂಚಾಯಿತಿ ಸದಸ್ಯ*

ತೋಟಗಾರಿಕಾ ಅಧಿಕಾರಿ ಸಭೆಯಲ್ಲಿ ಮಾಹಿತಿ ನೀಡುತ್ತಾ, ತಾಲ್ಲೂಕಿನಲ್ಲಿ ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ರೈತರಿಗೆ ಶೇ.90ರಷ್ಟು ಸಬ್ಸಿಡಿ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದರು.

ಸಭೆಯಲ್ಲಿ ಉಪಾಧ್ಯಕ್ಷ ಹೊನ್ನೇಗೌಡ, ಸ್ಥಾಯಿ ಸಮಿತಿ ಅಧ್ಯಕ್ಷ ಬಿ.ಪಿ.ಮಂಜೇಗೌಡ, ಪ್ರಭಾರಿ ಕಾರ್ಯ ನಿರ್ವಹಣಾಧಿಕಾರಿ ಸುದರ್ಶನ್ ಇದ್ದರು.

## ಡಿವೈಡರ್‌ಗೆ ಕಾರು ಡಿಕ್ಕಿ : ಯುವಕ ಸಾವು



**ಹಾಸನ :** ಡಿವೈಡರ್‌ಗೆ ಕಾರು ಡಿಕ್ಕಿ ಹೊಡೆದು ಪಲ್ಟಿಯಾದ ಪರಿಣಾಮ ಸ್ಥಳದಲ್ಲಿಯೇ ಚಾಲಕ ಮೃತಪಟ್ಟ ಘಟನೆ ಸೋಮವಾರ ಮಧ್ಯರಾತ್ರಿ ಸಂಭವಿಸಿದೆ.

ತಾಲ್ಲೂಕಿನ ದುದ್ದ ಹೋಬಳಿಯ ಮಾಯಸಂದ್ರ ನಿವಾಸಿ ಯೋಗೇಶ್ (24) ಎಂಬಾತನೇ ಮೃತಪಟ್ಟ ದುರ್ದೈವಿ. ನಗರದಿಂದ ತನ್ನ ಊರಿಗೆ ಆತ ತೆರಳುತ್ತಿದ್ದಾಗ ಪೃಥ್ವಿ ಥಿಯೇಟರ್ ಬಳಿ ಮತ್ತೊಂದು ವಾಹನವನ್ನು ಹಿಂದಿಕ್ಕಲು ಪ್ರಯತ್ನಿಸಿದಾಗ ರಸ್ತೆ ಮಧ್ಯೆ ಹಾಕಲಾಗಿದ್ದ ಡಿವೈಡರ್‌ಗೆ ಕಾರು ಡಿಕ್ಕಿ ಹೊಡೆದಿದ್ದು, ಪಲ್ಟಿಯಾಗಿ ಕೆಳಗೆ ಬಿದ್ದಿದೆ. ಯೋಗೀಶ್ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾನೆ.

ಚಾಲಕನ ಅತಿ ವೇಗವೇ ದುರಂತಕ್ಕೆ ಕಾರಣ ಎನ್ನಲಾಗಿದೆ. ಕಾರು ಗುರುತಿಸಲಾಗದಷ್ಟು ಜಜ್ಜಿ ಹೋಗಿದೆ. ಸಂಚಾರಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.